# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೊಂದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:07ನೇ ಡಿಸೆಂಬರ್, 2023**

**(ಸಮಯ: ಬೆಳಗ್ಗೆ 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ಸದನ ಸಮಿತಿಗಳ ಕಾಲಾವಕಾಶವನ್ನು ವಿಸ್ತರಿಸಲು ಪ್ರಸ್ತಾವ

ಅ. **ಶ್ರೀ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

"ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.09.2023ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

ಆ. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

"ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.10.2023ರಿಂದ 06 ತಿಂಗಳುಗಳ ಕಾಲಾವಕಾಶವನ್ನು ಸದನದ ಸಹಮತಿಯನ್ನು ಕಾಯ್ದಿರಿಸಿ ವಿಸ್ತರಿಸಲಾಗಿರುವ ಪ್ರಸ್ತಾವನೆಗೆ ಸದನದ ಸಹಮತಿ ಕೋರಿ ಪ್ರಸ್ತಾವವನ್ನು ಮಂಡಿಸುವುದು".

### 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮರಿತಿಬ್ಬೇಗೌಡ** ಅವರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಹಿರಿಯ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಹಾಗೂ ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿನ ಶಿಕ್ಷಕರುಗಳಿಗೆ ಬಡ್ತಿ ನೀಡುವಲ್ಲಿ ರೂಪಿಸಿರುವ ನಿಯಮಗಳಲ್ಲಿನ ತಾರತಮ್ಯದ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

..2..

02\. **ಶ್ರೀಯುತರುಗಳಾದ ಗೋವಿಂದರಾಜು, ಕೆ.ಎ. ತಿಪ್ಪೇಸ್ವಾಮಿ ಹಾಗೂ ಸೂರಜ್ ರೇವಣ್ಣ** ಅವರುಗಳು ಪ್ರಾದೇಶಿಕ ಅಸಮತೋಲನವನ್ನು ನಿರ್ಮೂಲನೆ ಮಾಡುವ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣದ ವಾರ್ಷಿಕ ನೋಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ಸ್ಥಾಪಿತವಾಗಿರುವ ವಿಶ್ವವಿದ್ಯಾಲಯಗಳಲ್ಲಿನ ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

01\. **ಶ್ರೀಯುತರುಗಳಾದ ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ಡಾ: ವೈ.ಎ. ನಾರಾಯಣಸ್ವಾಮಿ, ಶರವಣ ಟಿ.ಎ., ಛಲವಾದಿ ಟಿ. ನಾರಾಯಣಸ್ವಾಮಿ ಹಾಗೂ ಇತರರು** ರಾಷ್ಟ್ರೀಯ ಶಿಕ್ಷಣ ನೀತಿ-2020ನ್ನು ರದ್ದುಗೊಳಿಸಿರುವುದರಿಂದ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ತಲೆದೋರಿರುವ ಗೊಂದಲ-ಆತಂಕಗಳ ಗಂಭೀರ ವಿಷಯದ ಕುರಿತು ಪ್ರಸ್ತಾಪಿಸುವುದು.

02\. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ ಹಾಗೂ ಮಧು ಜಿ. ಮಾದೇಗೌಡ** ಅವರುಗಳು ಪ್ರತಿ ತಾಲ್ಲೂಕಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷಾ ಕೇಂದ್ರಗಳನ್ನು ಕಡಿಮೆ ಮಾಡಲು ಹಾಗೂ ಯಾವುದೇ ಅನುಭವ ತರಬೇತಿ ಇಲ್ಲದ ಪಂಚಾಯತ್ ರಾಜ್ ಇಲಾಖೆಯ ಸಿಬ್ಬಂದಿಗಳಿಂದ ಪರೀಕ್ಷೆ ನಡೆಸಲು ಉದ್ದೇಶಿಸಿರುವುದರಿಂದ ವಿದ್ಯಾರ್ಥಿಗಳ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುವುದಲ್ಲದೆ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರ ಕಾರ್ಯಭಾರವನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರ ಮೇಲುಸ್ತುವಾರಿಗೆ ನೀಡುವುದರಿಂದ ಉದ್ಭವಿಸುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸುವುದು.

03\. **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಕರ್ನಾಟಕ ಗ್ರಾಮ ಸ್ವರಾಜ್ ಹಾಗೂ ಪಂಚಾಯತ್ ರಾಜ್ ಕಾಯಿದೆ 1993ರಂತೆ ತ್ರಿಸ್ಥರ ಪಂಚಾಯತ್‌ಗಳಾದ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಕಾರ್ಯಕ್ರಮಗಳು, ಆಡಳಿತ ಮಾನವ ಸಂಪನ್ಮೂಲಗಳು ಮತ್ತು ಅನುದಾನಗಳನ್ನು ವರ್ಗಾವಣೆ ಮಾಡಿ ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಡುವ ಕುರಿತು ಪ್ರಸ್ತಾಪಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | |
|---|---|
| ಶ್ರೀಯುತರುಗಳಾದ:-<br>**ಕೋಟ ಶ್ರೀನಿವಾಸ ಪೂಜಾರಿ, ಎನ್. ರವಿಕುಮಾರ್, ನಿರಾಣಿ ಹಣಮಂತ್ ರುದ್ರಪ್ಪ ಹಾಗೂ ಛಲವಾದಿ ಟಿ. ನಾರಾಯಣಸ್ವಾಮಿ** | ರಾಜ್ಯದಲ್ಲಿ ಉಂಟಾಗಿರುವ ಬರಗಾಲದ ಪರಿಸ್ಥಿತಿಯನ್ನು ನಿಭಾಯಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವಲ್ಲಿ ಸರ್ಕಾರ ವಿಫಲವಾಗಿರುವ ಕುರಿತು |

## 06. ಖಾಸಗಿ ಕಾರ್ಯಕಲಾಪಗಳು

### ಅ) ಖಾಸಗಿ ವಿಧೇಯಕ

**ಆಹಾರ ಸುರಕ್ಷತೆ ಮತ್ತು ಗುಣಮಟ್ಟಗಳ ಅಧಿನಿಯಮ, (ತಿದ್ದುಪಡಿ) ವಿಧೇಯಕ, 2023**

ಅ) ಶ್ರೀ ಎನ್. ರವಿಕುಮಾರ್ ಅವರು **"ಆಹಾರ ಸುರಕ್ಷತೆ ಮತ್ತು ಗುಣಮಟ್ಟಗಳ ಅಧಿನಿಯಮ, (ತಿದ್ದುಪಡಿ) ವಿಧೇಯಕ"**ವನ್ನು ಮಂಡಿಸಲು ಅನುಮತಿಯನ್ನು ಕೋರುವುದು.

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

### ಆ) ಖಾಸಗಿ ನಿರ್ಣಯ

**ಶ್ರೀ ಯು.ಬಿ. ವೆಂಕಟೇಶ್ ಅವರಿಂದ ಈ ಕೆಳಕಂಡ ಖಾಸಗಿ ನಿರ್ಣಯದ ಕುರಿತು ಚರ್ಚೆ:-**

"ರಾಜ್ಯದಲ್ಲಿರುವ ರಾಜ್ಯ ಮತ್ತು ಕೇಂದ್ರ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಹಾಗೂ ಸರ್ಕಾರೇತರ ಸಂಸ್ಥೆಗಳಲ್ಲಿ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗಳನ್ನು ಸ್ಥಳೀಯರಿಗೆ ಮೀಸಲಿಡುವ ಕುರಿತಂತೆ ಸಂವಿಧಾನಕ್ಕೆ ತಿದ್ದುಪಡಿ ತರುವ ಉದ್ದೇಶದ ಕುರಿತು" ಮಂಡಿಸಿರುವ ನಿರ್ಣಯದ ಮೇಲೆ ಚರ್ಚೆ.

## 07. ವಿಶೇಷ ಚರ್ಚೆ

ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತು ವಿಶೇಷ ಚರ್ಚೆ

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ. ನೀರಾವರಿ ಆಶ್ರಿತ ಕೃಷಿ ಚಟುವಟಿಕೆಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡದಿರುವ ಬಗ್ಗೆ ದಿನಾಂಕ:04.12.2023ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:15(31)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

ಆ. ಬಿ.ಪಿ.ಎಲ್ ಕಾರ್ಡ್‌ದಾರರ ಬಗ್ಗೆ ದಿನಾಂಕ:04.12.2023ರ ಚುಕ್ಕೆ ರಹಿತ ಪ್ರಶ್ನೆ **ಸಂಖ್ಯೆ:21(80)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಎಸ್. ನವೀನ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**